ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ವಿವಿಧ ಇಲಾಖೆಯಲ್ಲಿ ಹುದ್ದೆಗಳು ಖಾಲಿ ಇರುವ ಬಗ್ಗೆ

ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ) :-

1259 (1451) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 5 ವರ್ಷಗಳಿಂದ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಒಟ್ಟು ಸಂಖ್ಯೆಯೆಷ್ಟು ;

(ಆ) ವಿವಿಧ ಇಲಾಖೆಯಲ್ಲಿ ಖಾಲಿ ಇರುವ ಸಿ-ದರ್ಜೆ, ಬಿ-ದರ್ಜೆ, ಎ-ದರ್ಜೆ, ಹುದ್ದೆಗಳ ವಿವರ ಒದಗಿಸುವುದು ;

(ಇ) ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳು ಕಳೆದ ಎಷ್ಟು ವರ್ಷಗಳಿಂದ ಭರ್ತಿಯಾಗದೆ ಬಾಕಿ ಉಳಿದಿದೆ ; ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲು ಕಾರಣವೇನು ;

(ಈ) ಸರ್ಕಾರ ನೇರ ನೇಮಕಾ ತಿ ಮಾಡಿಕೊಳ್ಳದೇ ಗುತ್ತಿಗೆ ಆಧಾರದ ಮೇಲೆ ಮಾನವ ಸೇವೆ ನೀಡುವ ಸಂಸ್ಥೆಗಳಿಗೆ ಅವಕಾಶ ಕಲ್ಪಿಸಿಕೊಡಲು ಕಾರಣವೇನು ;

(ಉ) ಮಾನವ ಸೇವೆ ನೀಡುತ್ತಿರುವ ಏಜೆನ್ಸಿಗಳು ಸರ್ಕಾರಕ್ಕೆ ಮಾಡುತ್ತಿರುವ ನಷ್ಟಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಗುತ್ತಿಗೆ ಆಧಾರದ ಮೇಲೆ ನೇಮಕವಾಗಿರುವ ಹಾಗೂ ಟೆಂಡರ್ ನೀಡಿರುವ ಏಜೆನ್ಸಿಗಳು ಒದಗಿಸುತ್ತಿರುವ ಮಾನವ ಸೇವೆಯಲ್ಲಿ ವ್ಯತ್ಯಾಸವಾಗಿ ಸರ್ಕಾರಕ್ಕೆ ಆಗುವ ನಷ್ಟವನ್ನು ಭರಿಸುವವರ್ಯಾರು?